ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 15-07-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಕೇಂದ್ರ ಪುರಸ್ಕೃತ ಪರಂಪರಾಗತ ಕೃಷಿ ವಿಕಾಸ ಯೋಜನೆಯ ರಾಷ್ಟ್ರೀಯ ಕಾರ್ಯಾಗಾರ:<br>ಉದ್ಘಾಟನೆ:<br>ಕೃಷ್ಣ ಭೈರೇಗೌಡ,<br>ಕೃಷಿ ಸಚಿವರು | **16-07-2016**<br>ಶನಿವಾರ<br>ಬೆಳಿಗ್ಗೆ<br>10–30 ಗಂಟೆಗೆ | ನಾರ್ಥ್ ಬ್ಲಾಕ್<br>ಅಡಿಟೋರಿಯಂ ಕೃಷಿ ವಿಶ್ವವಿದ್ಯಾನಿಲಯ, ಜಿ.ಕೆ.ವಿ.ಕೆ.<br>ಬೆಂಗಳೂರು. |
| 2 | ಕರ್ನಾಟಕ ಮುನ್ನಡೆ:<br>ಮುಖ್ಯಮಂತ್ರಿಗಳೊಡನೆ ಪತ್ರಕರ್ತರ ಮಾತುಕತೆ<br>ಉದ್ಘಾಟನೆ ಮತ್ತು ಸಂವಾದ:<br>ಸಿದ್ದರಾಮಯ್ಯ,<br>ಮುಖ್ಯಮಂತ್ರಿ, ಕರ್ನಾಟಕ ಸರ್ಕಾರ<br>ವಿಶೇಷ ಆಹ್ವಾನಿತರು:<br>ಡಾ: ಹೆಚ್.ಸಿ. ಮಹದೇವಪ್ಪ,<br>ಲೋಕೋಪಯೋಗಿ ಸಚಿವರು<br>ಆರ್. ರೋಷನ್ ಬೇಗ್,<br>ನಗರಾಭಿವೃದ್ಧಿ ಹಾಗೂ ಹಜ್ ಸಚಿವರು | **16-07-2016**<br>ಶನಿವಾರ<br>ಬೆಳಿಗ್ಗೆ<br>11–00 ಗಂಟೆಗೆ | ಸಮ್ಮೇಳನ ಸಭಾಂಗಣ,<br>ಕೊಠಡಿ ಸಂಖ್ಯೆ 419<br>4 ನೇ ಮಹಡಿ,<br>ವಿಕಾಸ ಸೌಧ,<br>ಬೆಂಗಳೂರು |
| 3 | ಬೆಳ್ಳಿ ಸಿನಿಮಾ – ಬೆಳ್ಳಿ ಮಾತು :<br>ಬೆಳ್ಳಿ ಸಿನಿಮಾ – ಬೆಳ್ಳಿಕಿರಣಾ | **16-07-2016**<br>ಶನಿವಾರ<br>ಸಂಜೆ | ಚಾಮುಂಡೇಶ್ವರಿ ಸ್ಟುಡಿಯೋ<br>ಮಿಲ್ಲರ್ಸ್ ರಸ್ತೆ,<br>ಬೆಂಗಳೂರು – 560 052 |

| | | | |
|---|---|---|---|
| | <u>ಬೆಳ್ಳಿಮಾತು:</u><br><br>ಕೆ. ಕೆ. ಶಿವರುದ್ರಯ್ಯ,<br>ಚಿತ್ರದ ನಿರ್ದೇಶಕ<br><br><u>ಮುಖ್ಯ ಅತಿಥಿಗಳು:</u><br><br>ಹೆಚ್. ಜಿ. ಸಿದ್ದರಾಮಯ್ಯ,<br>ಸಾಹಿತಿ,<br><br>ಡಾ. ಷರೀಫ್ ಸಿ,<br>ಸಾಹಿತಿ<br><br>ಎಂ. ಗುರುರಾಜ್ ಸೇಟ್,<br>ನಿರ್ಮಾಪಕ<br><br>ಎ. ಎಸ್. ವೆಂಕಟೇಶ್,<br>ನಿರ್ಮಾಪಕ<br><br>ದಿಲೀಪ್ ರಾಜ್,<br>ಚಿತ್ರ ನಟ,<br><br>ಕುಮಾರಿ. ಅನುಶ್ರೀ,<br>ಚಿತ್ರ ನಟಿ<br><br><u>ಅಧ್ಯಕ್ಷತೆ:</u><br><br>ಎಸ್. ವಿ. ರಾಜೇಂದ್ರಸಿಂಗ್ ಬಾಬು,<br>ಅಧ್ಯಕ್ಷರು,<br>ಕನ್ನಡ ಚಲನಚಿತ್ರ ಅಕಾಡೆಮಿ | 4–00 ಗಂಟೆಗೆ | |
| 4 | ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ 125 ನೇ ಜನ್ಮ ವರ್ಷಾಚರಣೆಯ ಕಾರ್ಯಕ್ರಮ:<br><br><u>ಉದ್ಘಾಟನೆ:</u><br><br>ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು,<br>ಕರ್ನಾಟಕ ಸರ್ಕಾರ. | **16-07-2016**<br>ಶನಿವಾರ<br>ಸಂಜೆ<br>4–00 ಗಂಟೆಗೆ | ಬ್ಯಾಂಕ್ವೆಟ್ ಹಾಲ್,<br>ವಿಧಾನಸೌಧ,<br>ಬೆಂಗಳೂರು. |

| | | | |
|---|---|---|---|
| | <u>ಅಧ್ಯಕ್ಷತೆ:</u><br><br>ಹೆಚ್.ಆಂಜನೇಯ,<br>ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.<br><br><u>ಮುಖ್ಯ ಅತಿಥಿ:</u><br><br>ಶ್ರೀಮತಿ ಉಮಾಶ್ರೀ,<br>ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು. | | |

ನಿರ್ದೇಶಕರ ಪರವಾಗಿ

## <u>ಪತ್ರಿಕಾ ಪ್ರಕಟಣೆ</u>

<u>ಕರ್ನಾಟಕ ವಿಧಾನ ಮಂಡಲದಲ್ಲಿ ಇಂದು:</u>

# <u>ವಿಧಾನಸಭೆ ಜುಲೈ 18 ಕ್ಕೆ ಮುಂದೂಡಿಕೆ</u>

ಬೆಂಗಳೂರು, ಜುಲೈ 15 (ಕರ್ನಾಟಕ ವಾರ್ತೆ)

ರಾಜ್ಯ ವಿಧಾನಸಭೆಯು ಇಂದು ಐದು ವಿಧೇಯಕಗಳ ಮಂಡನೆ ಮತ್ತು ಅನುಮೋದನೆಯ ನಂತರ ರಾಜ್ಯ ವಿಧಾನಸಭಾಧ್ಯಕ್ಷ ಕೆ.ಬಿ. ಕೋಳಿವಾಡ ಅವರು ವಿಧಾನಸಭೆಯ ಅಧಿವೇಶನವನ್ನು ಜುಲೈ 18 ರ ಸೋಮವಾರ ಬೆಳಿಗ್ಗೆ 11-00 ಗಂಟೆಗೆ ಮುಂದೂಡಿದರು.

ಬಾಬು:ಜಿಪಿಆರ್.

# <u>ವಿಧಾನ ಸಭಾಧ್ಯಕ್ಷರ ಮನವಿ</u>

ಬೆಂಗಳೂರು, ಜುಲೈ 15 (ಕರ್ನಾಟಕ ವಾರ್ತೆ)

ರಾಜ್ಯ ವಿಧಾನಸಭೆಯಲ್ಲಿ ಇಂದು ಮಧ್ಯಾಹ್ನ 12-015 ಕ್ಕೆ ಎರಡನೇ ಬಾರಿ ಸಮಾವೇಶಗೊಂಡಾಗ ವಿಧಾನಸಭಾಧ್ಯಕ್ಷರು ಆಡಳಿತ ಹಾಗೂ ವಿರೋಧ ಪಕ್ಷದ ಸದಸ್ಯರಲ್ಲಿ ಮನವಿಮಾಡಿ "ಪ್ರಜಾಪ್ರಭುತ್ವದಲ್ಲಿ ಸಂವಿಧಾನದ ಆಶಯಗಳಿಗೆ ವಿರುದ್ಧವಾದ ನಡಾವಳಿಕೆ ಬೇಡ ಒಂದು ಲಕ್ಷ ನಲವತ್ತು ಸಾವಿರ ಕೋಟಿ ರೂ.ಗಳ ಆಯವ್ಯಯ ಹಾಗೂ ಇಲಾಖಾ ಬೇಡಿಕೆಗಳ ಮೇಲೆ ಸಂಸದೀಯ ನಡಾವಳಿಯ ರೀತ್ಯ ಚರ್ಚೆ ನಡೆಯುವುದು ಸೂಕ್ತ". ಎಂದು ತಿಳಿಸಿದರು.

ಬಾಬು:ಜಿಪಿಆರ್.

# ಐದು ವಿಧೇಯಕಗಳ ಮಂಡನೆ, ಅಂಗೀಕಾರ

ಬೆಂಗಳೂರು, ಜುಲೈ 15 (ಕರ್ನಾಟಕ ವಾರ್ತೆ)

.ರಾಜ್ಯ ವಿಧಾನಸಭೆಯಲ್ಲಿ ಇಂದು ಶಾಸನ ರಚನೆ ಕಾರ್ಯದ ಅಂಗವಾಗಿ ಐದು ವಿಧೇಯಕಗಳು ಮಂಡಿಸಲ್ಪಟ್ಟಿದ್ದು ಇಂದೇ ಐದು ವಿಧೇಯಕಗಳಿಗೂ ಧ್ವನಿ ಮತದಿಂದ ಅಂಗೀಕಾರ ದೊರೆಯಿತು.

ಅರಣ್ಯ ಸಚಿವ ರಮಾನಾಥ್ ರೈ ಅವರು ಕರ್ನಾಟಕ ಅರಣ್ಯ ತಿದ್ದುಪಡಿ ವಿಧೇಯಕವನ್ನು ಮಂಡಿಸಿದರು. ಕಾನೂನು ಹಾಗೂ ಸಂಸದೀಯ ಸಚಿವ ಟಿ.ಬಿ. ಜಯಚಂದ್ರ ಅವರು ಗೃಹ ಸಚಿವರ ಪರವಾಗಿ ಕರ್ನಾಟಕ ಪೊಲೀಸ್ ತಿದ್ದುಪಡಿ ವಿಧೇಯಕ ಮಂಡಿಸಿದರು. ಸಹಕಾರ ಸಚಿವ ಹೆಚ್.ಎಸ್. ಮಹಾದೇವ ಪ್ರಸಾದ್ ಅವರು ಕರ್ನಾಟಕ ಸೌಹಾರ್ಧ ಸಹಕಾರಿ ತಿದ್ದುಪಡಿ ವಿಧೇಯಕವನ್ನು ಮಂಡಿಸಿದರು, ಕೃಷಿ ಮಾರುಕಟ್ಟೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಅವರು ಕೃಷಿ ಉತ್ಪನ್ನ ಮಾರುಕಟ್ಟೆ ನಿಯಂತ್ರಣ ವಿಧೇಯಕವನ್ನು ಮಂಡಿಸಿದರು, ಮುಖ್ಯಮಂತ್ರಿಗಳ ಪರವಾಗಿ ಕಾನೂನು ಸಚಿವ ಟಿ.ಬಿ. ಜಯಚಂದ್ರ ಅವರು 2016 ರ ಕರ್ನಾಟಕ ಗೃಹ ನಿರ್ಮಾಣ ತಿದ್ದುಪಡಿ ವಿಧೇಯಕವನ್ನು ಮಂಡಿಸಿದರು. ಎಲ್ಲಾ ಐದು ವಿಧೇಯಕಗಳು ಧ್ವನಿ ಮತದಿಂದ ಅನುಮೋದನೆಗೊಂಡವು.

ಬಾಬು:ಜಿಪಿಆರ್

# ಚುನಾವಣಾ ಪ್ರಸ್ತಾವ ಸೂಚನೆ

ಬೆಂಗಳೂರು, ಜುಲೈ 15 (ಕರ್ನಾಟಕ ವಾರ್ತೆ)

ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಟಿ. ಬಿ. ಜಯಚಂದ್ರ ಅವರು ಇಂದು ವಿಧಾನಸಭೆಯಲ್ಲಿ ವಿವಿಧ ಸಮಿತಿಗಳಿಗೆ ಚುನಾವಣಾ ಪ್ರಸ್ತಾವ ಸೂಚಿಸಿದರು.

ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡಾವಳಿಕೆಯ ನಿಯಮದ ಅನುಸಾರವಾಗಿ ಸಾರ್ವಜನಿಕ ಲೆಕ್ಕಪತ್ರ ಸಮಿತಿಗೆ 15 ಜನ ಸದಸ್ಯರನ್ನು, ಸಾರ್ವಜನಿಕ ಉದ್ದಿಮೆಗಳ ಸಮಿತಿಗೆ 15 ಜನ ಸದಸ್ಯರನ್ನು, ಹಕ್ಕುಬಾಧ್ಯತೆಗಳ ಸಮಿತಿಗೆ 9 ಜನ ಸದಸ್ಯರು, ಅಧೀನ ಶಾಸನ ರಚನಾ ಸಮಿತಿಗೆ 15 ಜನ ಸದಸ್ಯರನ್ನು , ಸರ್ಕಾರಿ ಭರವಸೆಗಳ ಸಮಿತಿಗೆ 15 ಜನ ಸದಸ್ಯರನ್ನು, ಸದಸ್ಯರುಗಳ ಖಾಸಗಿ ವಿಧೇಯಕಗಳ ಹಾಗೂ ನಿರ್ಣಯಗಳ ಸಮಿತಿಗೆ 10 ಜನ ಸದಸ್ಯರನ್ನು, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ 15 ಜನ ಸದಸ್ಯರನ್ನು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ 15 ಜನ ಸದಸ್ಯರನ್ನು ಹಾಗೂ ವಸತಿ ಸೌಕರ್ಯಗಳ ಸಮಿತಿಗೆ 12 ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚನೆ ಮಂಡಿಸಿದರು.

ಬಾಬು:ಜಿಪಿಆರ್.

# ನೇಮಕಾತಿ

ಬೆಂಗಳೂರು, ಜುಲೈ 15 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರದ ಸಚಿವಾಲಯದ ಸಂಸದೀಯ ವ್ಯವಹಾರಗಳ ಇಲಾಖೆಗೆ ಸಂಬಂಧಿಸಿದಂತೆ ಜಿ. ಶ್ರೀಧರ್ ಅಪರ ಪ್ರಾರೂಪಕಾರ ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ ಇವರನ್ನು ಮುಖ್ಯ ಜಾಗೃತ ಅಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಬಾಬು:ಜಿಪಿಆರ್.

# ಈ ವಾರದ ಬೆಳ್ಳಿ ಸಿನಿಮಾ "ಬೆಳ್ಳಿ ಕಿರಣಾ"

ಬೆಂಗಳೂರು, ಜುಲೈ 15 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ ಬೆಳ್ಳಿಮಾತು ಕಾರ್ಯಕ್ರಮದಲ್ಲಿ ಜುಲೈ 16 ರ ಶನಿವಾರ ಸಂಜೆ 4-00 ಗಂಟೆಗೆ ನಗರದ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಬೆಳ್ಳಿ ಸಿನಿಮಾ " ಬೆಳ್ಳಿ ಕಿರಣಾ " ಚಲನಚಿತ್ರವನ್ನು ಪ್ರದರ್ಶಿಸಲಾಗುವುದು ಎಂದು ಅಕಾಡೆಮಿ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ತಿಳಿಸಿದ್ದಾರೆ.

ಅಂದು " ಬೆಳ್ಳಿ ಕಿರಣಾ " ಚಲನಚಿತ್ರ ಪ್ರದರ್ಶನದ ನಂತರ ಚಿತ್ರದ ನಿರ್ದೇಶಕ ಕೆ. ಕೆ. ಶಿವರುದ್ರಯ್ಯ ಅವರ ಬೆಳ್ಳಿಮಾತು ಸಂವಾದ ಏರ್ಪಡಿಸಲಾಗಿದೆ. ಮುಖ್ಯ ಅತಿಥಿಗಳಾಗಿ ಸಾಹಿತಿಗಳಾದ ಎಸ್. ಜಿ. ಸಿದ್ದರಾಮಯ್ಯ, ಡಾ ಷರೀಫ್ ಸಿ, ನಿರ್ಮಾಪಕರಾದ ಎಂ. ಗುರುರಾಜ್ ಸೇಟ್ ಮತ್ತು ಎ. ಎಸ್. ವೆಂಕಟೇಶ್, ಲೇಖಕ ಬಿ. ಆರ್. ಲಕ್ಷ್ಮಣ ರಾವ್, ನಟ ದಿಲೀಪ್ ರಾಜ್ ಹಾಗೂ ನಟಿ ಕುಮಾರಿ ಅನುಶ್ರೀ ಪಾಲ್ಗೊಳ್ಳಲಿದ್ದು, ಸಮಾರಂಭದ ಅಧ್ಯಕ್ಷತೆಯನ್ನು ಅಕಾಡೆಮಿ ಅಧ್ಯಕ್ಷ ಎಸ್. ವಿ. ರಾಜೇಂದ್ರಸಿಂಗ್ ಬಾಬು ವಹಿಸುವರು ಎಂದು ಅವರು ತಿಳಿಸಿದ್ದಾರೆ.

ಬಾಬು::ಜಿಪಿಆರ್

# ಜುಲೈ 17 ರ ಭಾನುವಾರ ಕಬ್ಬನ್ ಉದ್ಯಾನವನದಲ್ಲಿ

ಬೆಂಗಳೂರು, ಜುಲೈ 15 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:17-07-2016ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ

ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ" ಎಂಬ ಶೀರ್ಷಿಕೆಯಡಿ ಶ್ರೀ ಹೆಚ್.ಕೆ. ಪಾಪಣ್ಣ ಮತ್ತು ತಂಡದವರು ಬೆಂಗಳೂರುರವರಿಂದ ಜಾನಪದ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ" ಎಂಬ ಶೀರ್ಷಿಕೆಯಡಿ ಶ್ರೀ ಕೆ.ಎನ್.ನಾಗೇಶ್ ಮತ್ತು ತಂಡದವರು ಬೆಂಗಳೂರುರವರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
3. ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
5. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ **Cut Fruits, Dry Fruits** ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳ ಮಾರಾಟವನ್ನು ವಿಧಾನಸೌಧ ಮತ್ತು ಹೈಕೋರ್ಟ್ ಮುಂಭಾಗದ ಮೆಟ್ರೊ ನಿಲ್ದಾಣದ ಹತ್ತಿರ ಕೈಗೊಳ್ಳುತ್ತಾರೆ.
7. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

**I.**ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಶ್ರೀ ಶ್ರೀಕಾಂತ್ ಮತ್ತು ತಂಡದವರಿಂದ ಕರ್ನಾಟಕ್ ಶಾಸ್ತ್ರೀಯ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ ಶ್ರೀ ವಾಣಿ ವಿದ್ಯಾ ಕೇಂದ್ರ, ಮಾಗಡಿ ರೋಡ್, ಮಾಚೋಹಳ್ಳಿ ಶಾಲಾ ಮಕ್ಕಳಿಂದ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

- ಬೆಳಿಗ್ಗೆ 9.00 ಗಂಟೆಯಿಂದ ಬೆಳಿಗ್ಗೆ 10.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ಧಾತು ಸೆಂಟರ್ ಫಾರ್ ಶೇರಿಂಗ್‌ರವರಿಂದ ಬೊಂಬೆಯಾಟ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಸಂಜೆ: 4.00 ಗಂಟೆಯಿಂದ 5.00 ಗಂಟೆಯವರೆಗೆ, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಫೌಂಡೇಷನ್‌ರವರ ಸಹಯೋಗದೊಂದಿಗೆ ಶ್ರೀ ಟಿ. ಯಲ್ಲಪ್ಪ, ಕನ್ನಡ ಪ್ರಾಧ್ಯಾಪಕರವರಿಂದ ಎಮ್. ಗೋಪಾಲ ಕೃಷ್ಣ ಅಡಿಗರ ಸಾಹಿತ್ಯ ಚಿಂತನ ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- ಬೆಳಿಗ್ಗೆ 7.00 ರಿಂದ ಬೆಳಿಗ್ಗೆ 10.00 ಘಂಟೆಯವರೆಗೆ ಯೋಗ ಪ್ರಾಣ ವಿದ್ಯಾ ಸಂಸ್ಥೆಯ **Soham Healing Center,** ಆರ್.ಟಿ. ನಗರ ಬೆಂಗಳೂರು ರವರ ವತಿಯಿಂದ ಯೋಗ ಪ್ರಾಣ ವಿದ್ಯಾ ಕಾರ್ಯಕ್ರಮವನ್ನು ಉಚಿತವಾಗಿ ಏರ್ಪಡಿಸಲಾಗಿದೆ.
- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ವಿದ್ಯಾರಣ್ಯ ಸಂಸ್ಥೆಯು ನಡೆಸುತ್ತಿರುವ ವೃದ್ಧಾಶ್ರಮ ಫಲಾನುಭವಿಗಳಿಂದ ತಯಾರಿಸಿದ ವಸ್ತುಗಳ ಪ್ರದರ್ಶನ ಮತ್ತು ಮಾರಾಟವನ್ನು ಏರ್ಪಡಿಸಲಾಗಿದೆ.

ಬಾಬು::ಜಿಪಿಆರ್

# ಕಲಾಪ್ರದರ್ಶನಗಳಿಗೆ ಧನಸಹಾಯ : ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 15 (ಕರ್ನಾಟಕ ವಾರ್ತೆ)

ಕರ್ನಾಟಕ ಲಲಿತಕಲಾ ಅಕಾಡೆಮಿಯು ರಾಜ್ಯದ ಕಲಾವಿದರಿಗೆ ರಾಜ್ಯದ ಒಳಗೆ ಮತ್ತು ಹೊರ ರಾಜ್ಯಗಳಲ್ಲಿ ಏಕವ್ಯಕ್ತಿ ಮತ್ತು ಸಮೂಹ ಕಲಾಪ್ರದರ್ಶನ ಏರ್ಪಡಿಸಲು ಧನಸಹಾಯ ನೀಡುತ್ತಿದೆ. 2016ನೇ ಸಾಲಿನ ಏಕವ್ಯಕ್ತಿ ಮತ್ತು ಸಮೂಹ ಕಲಾಪ್ರದರ್ಶನಕ್ಕೆ ಧನಸಹಾಯ ನೀಡಲು ಅರ್ಜಿಗಳನ್ನು ಆಹ್ವಾನಿಸಿದೆ.

ಈ ಪ್ರದರ್ಶನದಲ್ಲಿ ಭಾಗವಹಿಸಲಿಚ್ಚಿಸುವ ಕಲಾವಿದರು ತಾವು ರಚಿಸಿದ ಕಲಾಕೃತಿಗಳ 5 x 7 ಅಂಗುಲ ಅಳತೆಯ ಛಾಯಾಚಿತ್ರಗಳನ್ನು ಕಳಿಸಬೇಕಾಗಿದ್ದು, ಅವು ಕಳೆದ 2 ವರ್ಷಗಳಿಂದೀಚೆಗೆ ರಚಿಸಿದ ಕಲಾಕೃತಿಗಳಾಗಿರಬೇಕು. ಯಾವುದೇ ಕಲಾಪ್ರದರ್ಶನದಲ್ಲಿ ಪ್ರದರ್ಶನಗೊಂಡಿರಬಾರದು. ಧನಸಹಾಯಕ್ಕೆ ಆಸಕ್ತ ಕಲಾವಿದರು ತಮ್ಮ ಕನಿಷ್ಠ ಐದು ಕಲಾಕೃತಿಗಳ ಛಾಯಾಚಿತ್ರಗಳು ಮತ್ತು ಕಲಾವಿದರ ಭಾವಚಿತ್ರ, ಪರಿಚಯ ಪತ್ರದೊಂದಿಗೆ ಸೂಕ್ತ ದಾಖಲೆಗಳನ್ನು ಲಗತ್ತಿಸಿ ದಿನಾಂಕ: 15–08–2016 ರ ಒಳಗಾಗಿ ಅರ್ಜಿಗಳನ್ನು ಅಕಾಡೆಮಿಯ ಕಚೇರಿಗೆ (ಅಂಚೆ ಮೂಲಕ ಅಥವಾ ಖುದ್ದಾಗಿ) ತಲುಪಿಸುವುದು. ಈ ಕುರಿತ ಅರ್ಜಿಗಳನ್ನು ಆಯ್ಕೆ ಸಮಿತಿಯು ಪರಿಶೀಲಿಸಿ ತೀರ್ಮಾನ ಕೈಗೊಳ್ಳುವುದು. ಆಯ್ಕೆ ಸಮಿತಿಯ ನಿರ್ಧಾರವೇ ಅಂತಿಮ.

ಅರ್ಜಿಯನ್ನು ಕರ್ನಾಟಕ ಲಲಿತಕಲಾ ಅಕಾಡೆಮಿಯ ಕಚೇರಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು– 560 002 ಇಲ್ಲಿ ಖುದ್ದಾಗಿ ರೂ 5/– ಗಳ ಅಂಚೆ ಚೀಟಿ ಲಗತ್ತಿಸಿದ ಸ್ವ–ವಿಳಾಸ ಮತ್ತು ದೂರವಾಣಿಯ ಸಂಖ್ಯೆಯುಳ್ಳ ಲಕೋಟೆಯನ್ನು ಕಳುಹಿಸಿ ಪಡೆಯಬಹುದಾಗಿದೆ. ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ : 080 – 22480297 ನ್ನು ಅಥವಾ Facebook, email.:kla.karnataka@gmail.com ನಲ್ಲಿ ಅರ್ಜಿಯನ್ನು ಪಡೆಯಬಹುದಾಗಿದೆ.

ಬಾಬು:ಜಿಪಿಆರ್.

# ಪಿ.ಹೆಚ್.ಡಿ. ಪದವಿ

ಬೆಂಗಳೂರು, ಜುಲೈ 15 (ಕರ್ನಾಟಕ ವಾರ್ತೆ)

ಬಿ.ಎಸ್. ವಿಶ್ವನಾಥ್ ಅವರ ಮಾರ್ಗದರ್ಶನದಲ್ಲಿ ಸಂಶೋಧನೆ ನಡೆಸಿದ ವಿಲಾಸ್ ಹಿರೇಮಠ ಅವರು ಸಾದರಪಡಿಸಿದ ಬಯೋ ಕೆಮಿಸ್ಟ್ರಿಯ ಮಹಾಪ್ರಬಂಧವನ್ನು ಪಿ.ಹೆಚ್.ಡಿ. ಪದವಿಗಾಗಿ ಅಂಗೀಕರಿಸಲಾಗಿದೆ ಎಂದು ಮೈಸೂರು ವಿಶ್ವವಿದ್ಯಾನಿಲಯದ ಅಧಿಸೂಚನೆ ತಿಳಿಸಿದೆ.

ಬಾಬು:ಜಿಪಿಆರ್.